ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ : ಸಿ5(2)ಪ.ಸ.ಬಡ್ತಿ-01/2012-13 ದಿನಾಂಕ : 08-10-2013

**ಅಧಿಸೂಚನೆ**

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಾಯಕ ನಿರ್ದೇಶಕರು / ಪತ್ರಾಂಕಿತ ವ್ಯವಸ್ಥಾಪಕರುಗಳಿಗೆ ಪತ್ರಾಂಕಿತ ಸಹಾಯಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪ್ಯೆ 2008 ದಿ : 06-01-2009.

3 :- ದಿನಾಂಕ : 17-08-2013 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4:- ದಿನಾಂಕ: 30-09-2013 ರಂದು ನಡೆದ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಅರ್ಹ ಅಧಿಕಾರಿಗಳು ಭಾಗವಹಿಸಿ, ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ.

* * * * * *

**ಪ್ರಸ್ತಾವನೆ :**

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ಸಹಾಯಕರ ವೃಂದದ ಹುದ್ದೆಗೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ಸಹಾಯಕರ ಹುದ್ದೆಯಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರ / ಸಹಾಯಕ ನಿರ್ದೇಶಕರು(ಬೋಧಕೇತರ) ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 17-08-2013 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು. ಸದರಿ ಸಭೆಯಲ್ಲಿ ದಿನಾಂಕ : 31-12-2013 ರ ಅಂತ್ಯಕ್ಕೆ ಖಾಲಿ ಆಗುವ 06 ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಲು ನಿರ್ಧರಿಸಲಾಯಿತು.

ಬಡ್ತಿಗಾಗಿ ಅರ್ಹರಿರುವ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋಧಕೇತರ) ಅವರೇ ಸ್ವತ: ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳುವ ಸಲುವಾಗಿ ದಿನಾಂಕ : 30-09-2013 ರಂದು ಸ್ಥಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗಿ ಅರ್ಹ ಅಧಿಕಾರಿಗಳು ಸ್ಥಳಗಳನ್ನು ಆಯ್ಕೆ ಮಾಡಿಕೊಂಡಿದ್ದು, ಅವರುಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ಈ ಕೆಳಕಂಡ ಆದೇಶ.

**ಆದೇಶ :-**

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 21600-40050 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು(ಬೋಧಕೇತರ) ಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 22800-43200 ರ ಪತ್ರಾಂಕಿತ ಸಹಾಯಕರ ಹುದ್ದೆಗಳಿಗೆ

ಸ್ಥಾನಪನ್ನ ಬಡ್ತಿಯನ್ನು ನೀಡಿ ಅವರುಗಳ ಹೆಸರಿನ ಮುಂದೆ ಸೂಚಿಸಲಾಗಿರುವ ಹುದ್ದೆ ಮತ್ತು ಸ್ಥಳಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶವಾಗುವವರೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಪತ್ರಾಂಕಿತ ವ್ಯವಸ್ಥಾಪಕರ ಹೆಸರು ಹಾಗೂ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ಹೆಸರು ಮತ್ತು ವಿಳಾಸ ಶ್ರೀಮತಿ / ಶ್ರೀ | ಪತ್ರಾಂಕಿತ ಸಹಾಯಕರ ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಹುದ್ದೆ ಮತ್ತು ಕಛೇರಿಯ ವಿಳಾಸ |
|---|---|---|---|
| 1 | 32 | ಎಂ.ಡಿ. ಶಾರದಾಂಬ, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕರಿಗಳ ಕಛೇರಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ | ಪತ್ರಾಂಕಿತ ಸಹಾಯಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೊಡಗು ಜಿಲ್ಲೆ, ಮಡಿಕೇರಿ (ಶ್ರೀ ಕೆ.ಎನ್. ವೆಂಕಟರಮಣ ಭಟ್ ಇವರ ಬಡ್ತಿಯಿಂದ ತೆರವಾದ ಹುದ್ದೆ) |
| 2 | 33 | ಹೆಚ್ .ಎಸ್. ರಾಜಶೇಖರಯ್ಯ, ಪತ್ರಾಂಕಿತ ವ್ಯವಸ್ಥಾಪಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಧುಗಿರಿ ಶೈಕ್ಷಣಿಕ ಜಿಲ್ಲೆ, ಮಧುಗಿರಿ | ಪತ್ರಾಂಕಿತ ಸಹಾಯಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ. ( ಶ್ರೀ ವಿಶ್ವನಾಥ್ ಇವರ ವರ್ಗಾವಣೆಯಿಂದತೆರವಾದ ಹುದ್ದೆ) |
| 3 | 44 | ಹೆಚ್.ವಿ. ಸಂಜೀವಯ್ಯ, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕರಿಗಳ ಕಛೇರಿ, ಆನೇಕಲ್ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ | ಪತ್ರಾಂಕಿತ ಸಹಾಯಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ( ಶ್ರೀ ಕೆ. ಶ್ರೀನಿವಾಸ ನಾಯಕ್ ಇವರ ಬಡ್ತಿಯಿಂದ ತೆರವಾದಿ ಹುದ್ದೆ) |

ಈ ಆದೇಶ ಜಾರಿಯಾದ 15 ದಿನಗಳ ಒಳಗಾಗಿ ಸ್ಥಾನಪನ್ನ ಬಡ್ತಿಯನ್ನು ಹೊಂದಿದ ಅಧಿಕಾರಿಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಛೇರಿಯಿಂದ ಬಿಡುಗಡೆಯಾಗಿ, ಬಡ್ತಿಯನ್ನು ನೀಡಿರುವ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗಲು ಈ ಮೂಲಕ ಆದೇಶಿಸಲಾಗಿದೆ.

(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

(ಹೆಚ್.ಎಸ್. ರಾಮರಾವ್)
ಅಪರ ಆಯುಕ್ತರು(ಆಡಳಿತ)(ಹೆ.ಪ್ರ)

ಇವರಿಗೆ:

1) ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು. ರವರಿಗೆ ಮಾಹಿತಿಗಾಗಿ.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.
3) ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
4) ಸಂಬಂಧಿಸಿದ ಕಛೇರಿ ಮುಖ್ಯಸ್ಥರಿಗೆ.
5) ಸಂಬಂಧಿಸಿದ ಅಧಿಕಾರಿಗಳಿಗೆ
6) ಕಛೇರಿ ಪ್ರತಿ.